Akashvani : Bengaluru
National Bulletin In Kannada
27.10.2025 : 1310hrs

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

27.10.2025 : 1310hrs

*******

<u>ಮುಖ್ಯಾಂಶಗಳು</u>

೧. ನವೀಕರಿಸಬಹುದಾದ ಇಂಧನ ಕ್ಷೇತ್ರದಲ್ಲಿ ಭಾರತದಿಂದ ೪೦೦ ವೃತ್ತಿಪರರಿಗೆ ತರಬೇತಿ – ಪ್ರಧಾನಿ ನರೇಂದ್ರ ಮೋದಿ ಘೋಷಣೆ

೨. ಭಾರತ ಕಡಲ ಸಪ್ತಾಹ - ೨೦೨೫ಕ್ಕೆ ಮುಂಬೈನಲ್ಲಿಂದು ಕೇಂದ್ರ ಸಚಿವ ಅಮಿತ್ ಶಾ ಚಾಲನೆ

೩. ಕೌಲಾಲಂಪುರದಲ್ಲಿಂದು ನಡೆಯುವ ಪೂರ್ವ ಏಷ್ಯಾ ಶೃಂಗಸಭೆಯಲ್ಲಿ ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಭಾಗಿ

೪. ನವದೆಹಲಿಯಲ್ಲಿ ಇಂದಿನಿಂದ ಅಂತಾರಾಷ್ಟ್ರೀಯ ಸೌರ ಒಕ್ಕೂಟ ಸಭೆಯ ೮ನೇ ಅಧಿವೇಶನ ಆರಂಭ

************

ಪ್ರಧಾನಮಂತ್ರಿ ನರೇಂದ್ರ ಮೋದಿ ಮತ್ತು ಆಸಿಯಾನ್ ನಾಯಕರು ಜಂಟಿಯಾಗಿ ಆಸಿಯಾನ್-ಭಾರತ ಸಂಬಂಧಗಳಲ್ಲಿನ ಪ್ರಗತಿಯನ್ನು ಪರಿಶೀಲಿಸಿದರು. ಈ ವೇಳೆ ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಯನ್ನು ಬಲಪಡಿಸುವ ಉಪಕ್ರಮಗಳ ಬಗ್ಗೆ ಚರ್ಚಿಸಿದರು. ತಮ್ಮ ಭಾಷಣದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು, ಆಸಿಯಾನ್ ಏಕತೆ ಮತ್ತು ಇಂಡೋ ಪೆಸಿಫಿಕ್ ಪ್ರದೇಶದಲ್ಲಿ ಆಸಿಯಾನ್ ದೃಷ್ಟಿಕೋನಕ್ಕೆ ಭಾರತದ ಬೆಂಬಲವನ್ನು ಪುನರುಚ್ಚರಿಸಿದರು. ಆಸಿಯಾನ್ ಸಮುದಾಯ ದೃಷ್ಟಿಕೋನ - ೨೦೪೫ ಅಳವಡಿಸಿಕೊಂಡಿದ್ದಕ್ಕಾಗಿ ಆಸಿಯಾನ್ ರಾಷ್ಟ್ರಗಳನ್ನು ಅವರು, ಶ್ಲಾಘಿಸಿದರು. ಜಾಗತಿಕ ಶಾಂತಿ ಮತ್ತು ಭದ್ರತೆಗೆ ಭಯೋತ್ಪಾದನೆ ಗಂಭೀರ ಸವಾಲಾಗಿದೆ. ಭಯೋತ್ಪಾದನೆ ವಿರುದ್ಧದ ಹೋರಾಟದಲ್ಲಿ ಏಕತೆಯ ಮಹತ್ವ ಹೆಚ್ಚಿದೆ ಎಂದು

ಪ್ರಧಾನಿ ಮೋದಿ ಪ್ರತಿಪಾದಿಸಿದರು. ಆಸಿಯಾನ್-ಭಾರತ ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಯನ್ನು ಕಾರ್ಯಗತಗೊಳಿಸಲು ಆಸಿಯಾನ್-ಭಾರತ ಕ್ರಿಯಾಯೋಜನೆಯ ಅನುಷ್ಠಾನಕ್ಕೆ ವಿಸ್ತೃತ ಬೆಂಬಲವನ್ನು ಪ್ರಧಾನಿ ಮೋದಿ ಘೋಷಿಸಿದರು. ಸುರಕ್ಷಿತ ಕಡಲ ಪರಿಸರಕ್ಕಾಗಿ ೨ನೇ ಆಸಿಯಾನ್-ಭಾರತ ಕಡಲ ಸಮರಭ್ಯಾಸವನ್ನು ಆಯೋಜಿಸಲು ಪ್ರಸ್ತಾಪಿಸಿದರು. ಆಸಿಯಾನ್ ಪವರ್‌ಗ್ರಿಡ್ ಉಪಕ್ರಮವನ್ನು ಬೆಂಬಲಿಸುವ ನಿಟ್ಟಿನಲ್ಲಿ ನವೀಕರಿಸಬಹುದಾದ ಇಂಧನ ಕ್ಷೇತ್ರದಲ್ಲಿ ಭಾರತದಿಂದ ೪೦೦ ವೃತ್ತಿಪರರಿಗೆ ತರಬೇತಿ ನೀಡುವುದಾಗಿ ಇದೇ ವೇಳೆ ಪ್ರಧಾನಿ ನರೇಂದ್ರ ಮೋದಿ ಘೋಷಿಸಿದರು. ಭಾರತ ಮತ್ತು ಆಸಿಯಾನ್ ಆಳವಾದ ಐತಿಹಾಸಿಕ ಸಂಬಂಧಗಳು ಮತ್ತು ಹಂಚಿಕೆಯ ಮೌಲ್ಯಗಳಿಂದ ಸಂಪರ್ಕ ಹೊಂದಿವೆ ಎಂದರು. ಅನಿಶ್ಚಿತತೆಯ ಈ ಯುಗದಲ್ಲಿಯೂ ಸಹ, ಭಾರತ-ಆಸಿಯಾನ್ ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಯು ನಿರಂತರ ಪ್ರಗತಿಯನ್ನು ಕಂಡಿದೆ. ಈ ಬಲವಾದ ಪಾಲುದಾರಿಕೆ ಜಾಗತಿಕ ಸ್ಥಿರತೆ ಮತ್ತು ಅಭಿವೃದ್ಧಿಗೆ ಬಲವಾದ ಅಡಿಪಾಯವಾಗಿ ಹೊರಹೊಮ್ಮುತ್ತಿದೆ ಎಂದು ಪ್ರಧಾನಿ ಮೋದಿ ಹೇಳಿದರು. ಪ್ರತಿಯೊಂದು ವಿಪತ್ತಿನಲ್ಲಿಯೂ ಭಾರತ ತನ್ನ ಆಸಿಯಾನ್ ಸ್ನೇಹಿತರೊಂದಿಗೆ ದೃಢವಾಗಿ ನಿಂತಿದೆ. ಕಡಲ ಭದ್ರತೆ ಮತ್ತು ಕಡಲ ಆರ್ಥಿಕತೆಯಲ್ಲಿ ಸಹಕಾರವು ವೇಗವಾಗಿ ಬೆಳೆಯುತ್ತಿದೆ ಎಂದ ಅವರು, ೨೦೨೬ ಅನ್ನು 'ಆಸಿಯಾನ್-ಭಾರತ ಕಡಲ ಸಹಕಾರ ವರ್ಷ' ಎಂದು ಪ್ರಧಾನಿ ನರೇಂದ್ರ ಮೋದಿ ಘೋಷಿಸಿದರು.

**ಧ್ವನಿ : ಪ್ರಧಾನಿ ನರೇಂದ್ರ ಮೋದಿ (೨೩ ಸೆಕೆಂಡುಗಳು)**

************

ಮುಂಬೈನಲ್ಲಿನಲ್ಲಿಂದು ಭಾರತ ಕಡಲ ಸಪ್ತಾಹ-೨೦೨೫ ಅನ್ನು ಕೇಂದ್ರ ಗೃಹ ಸಚಿವ ಅಮಿತ್ ಶಾ ಉದ್ಘಾಟಿಸಲಿದ್ದಾರೆ. ಬಂದರುಗಳು, ಹಡಗು ಸಾಗಣೆ ಮತ್ತು ಜಲಮಾರ್ಗಗಳ ಸಚಿವಾಲಯ, ಭಾರತೀಯ ಬಂದರು ಸಂಘದ ಸಹಭಾಗಿತ್ವದಲ್ಲಿ ಆಯೋಜಿಸಿರುವ ಐದು ದಿನಗಳ ಈ ಕಾರ್ಯಕ್ರಮ, ಸುಸ್ಥಿರ ಕಡಲ ಬೆಳವಣಿಗೆ, ವ್ಯಾಪಾರ ವಿಸ್ತರಣೆ ಮತ್ತು ಕಡಲ ಆರ್ಥಿಕ ಅಭಿವೃದ್ಧಿಗಾಗಿ ಭಾರತದ ದೃಷ್ಟಿಕೋನವನ್ನು ಪ್ರದರ್ಶಿಸುತ್ತದೆ. ಈ ಕಾರ್ಯಕ್ರಮದಲ್ಲಿ ಭಾರತ ಮತ್ತು ವಿದೇಶಗಳಿಂದ ಕಡಲ ಉದ್ಯಮದ ನಾಯಕರು, ನೀತಿ ನಿರೂಪಕರು, ಹೂಡಿಕೆದಾರರು,

ನಾವೀನ್ಯಕಾರರು ಮತ್ತು ಪಾಲುದಾರರು ಭಾಗವಹಿಸಲಿದ್ದಾರೆ. ಭಾರತ ಕಡಲ ಸಪ್ತಾಹ-೨೦೨೫ ಪ್ರದರ್ಶನಗಳು, ಚರ್ಚೆಗಳು ಮತ್ತು ಸಂವಾದಾತ್ಮಕ ಅಧಿವೇಶನಗಳನ್ನು ಒಳಗೊಂಡಿರುತ್ತದೆ. ಬಂದರುಗಳು, ಸಾಗಣೆ, ಲಾಜಿಸ್ಟಿಕ್ಸ್ ಮತ್ತು ಕಡಲ ತಂತ್ರಜ್ಞಾನದಲ್ಲಿನ ಅವಕಾಶಗಳನ್ನು ಪ್ರತಿಬಿಂಬಿಸುವ ಕಾರ್ಯಕ್ರಮ ಇದಾಗಲಿದೆ. ಜಾಗತಿಕ ಕಡಲ ಕೇಂದ್ರವಾಗಿ ಭಾರತದ ಸ್ಥಾನವನ್ನು ಬಲಪಡಿಸುವುದು ಮತ್ತು ವಲಯದಾದ್ಯಂತ ಸಹಯೋಗ, ನಾವೀನ್ಯತೆ ಮತ್ತು ನೀತಿ ಸಂವಾದವನ್ನು ಉತ್ತೇಜಿಸುವ ಗುರಿಯನ್ನು ಈ ಕಾರ್ಯಕ್ರಮ ಹೊಂದಿದೆ.

************

ವಿದೇಶಾಂಗ ಸಚಿವ ಎಸ್.ಜೈಶಂಕರ್ ಅವರು ಇಂದು ಮಲೇಷ್ಯಾದ ಕೌಲಾಲಂಪುರದಲ್ಲಿ ನಡೆಯಲಿರುವ ೨೦ನೇ ಪೂರ್ವ ಏಷ್ಯಾ ಶೃಂಗಸಭೆಯಲ್ಲಿ ಭಾರತವನ್ನು ಪ್ರತಿನಿಧಿಸಲಿದ್ದಾರೆ. ಪೂರ್ವ ಏಷ್ಯಾ ಶೃಂಗಸಭೆಯು ಇಂಡೋ-ಪೆಸಿಫಿಕ್ ಪ್ರದೇಶದಲ್ಲಿ ಶಾಂತಿ, ಸ್ಥಿರತೆ ಮತ್ತು ಸಮೃದ್ಧಿಗೆ ಇರುವ ಸವಾಲುಗಳ ಕುರಿತು ಚರ್ಚಿಸಲು ಮತ್ತು ಪ್ರಾದೇಶಿಕ ಹಾಗೂ ಅಂತಾರಾಷ್ಟ್ರೀಯ ಬೆಳವಣಿಗೆಗಳ ಕುರಿತು ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಳ್ಳಲು ಅವಕಾಶ ಒದಗಿಸುತ್ತದೆ.

************

ಅಂತಾರಾಷ್ಟ್ರೀಯ ಸೌರ ಒಕ್ಕೂಟ ಸಭೆಯ ೮ನೇ ಅಧಿವೇಶನ ನವದೆಹಲಿಯ ಭಾರತ್ ಮಂಟಪದಲ್ಲಿ ಇಂದು ಆರಂಭವಾಗಲಿದೆ. ೪ ದಿನಗಳ ಈ ಕಾರ್ಯಕ್ರಮದಲ್ಲಿ ೧೨೪ ದೇಶಗಳು ಭಾಗವಹಿಸಲಿದ್ದು, ಜಗತ್ತಿನಾದ್ಯಂತ ೪೦ಕ್ಕೂ ಹೆಚ್ಚು ಸಚಿವರು ಈ ಅಧಿವೇಶನದಲ್ಲಿ ಭಾಗವಹಿಸಲಿದ್ದಾರೆ. ಈ ಕಾರ್ಯಕ್ರಮ ಜಾಗತಿಕ ಸಮುದಾಯವನ್ನು ಒಟ್ಟುಗೂಡಿಸಿ, ಸಹಕಾರವನ್ನು ಗಾಢವಾಗಿಸಲು ಮತ್ತು ಉಜ್ವಲ ಹಾಗೂ ಸುಸ್ಥಿರ ಭವಿಷ್ಯಕ್ಕಾಗಿ ಸೌರಶಕ್ತಿ ಅಳವಡಿಕೆಯನ್ನು ವೇಗಗೊಳಿಸಲು ಸಹಾಯ ಮಾಡುತ್ತದೆ. ಭಾರತ ಐದು ವರ್ಷಗಳ ಹಿಂದೆ ಪಳೆಯುಳಿಕೆಯೇತರ ಇಂಧನ ಮೂಲಗಳಿಂದ ತನ್ನ ಒಟ್ಟು ಸ್ಥಾಪಿತ ವಿದ್ಯುತ್ ಉತ್ಪಾದನಾ ಸಾಮರ್ಥ್ಯದ ೫೦ ಪ್ರತಿಶತವನ್ನು, ತನ್ನ ಗುರಿಗಿಂತ ಮೊದಲೇ ಸಾಧಿಸಿತು. ಭಾರತ ವಿಶ್ವದ ೩ನೇ ಅತಿದೊಡ್ಡ ಸೌರ ಉತ್ಪಾದಕ ಮತ್ತು ನವೀಕರಿಸಬಹುದಾದ ಇಂಧನ ಬೆಳವಣಿಗೆಗೆ ವಿಶ್ವದ ೨ನೇ ಅತಿದೊಡ್ಡ ಮಾರುಕಟ್ಟೆಯಾಗಿದೆ. ಪಿಎಂ ಸೂರ್ಯ ಘರ್ ಮುಫ್ತ್ ಯೋಜನೆಯಡಿಯಲ್ಲಿ ೨೦

ಲಕ್ಷಕ್ಕೂ ಹೆಚ್ಚು ಕುಟುಂಬಗಳು ಈಗಾಗಲೇ ಪ್ರಯೋಜನ ಪಡೆಯುತ್ತಿವೆ. ಅಂತಾರಾಷ್ಟ್ರೀಯ ಸೌರ ಒಕ್ಕೂಟವು ೧೨೪ ಸದಸ್ಯ ಮತ್ತು ಸಹಿ ಹಾಕಿದ ದೇಶಗಳನ್ನು ಹೊಂದಿರುವ ಅಂತಾರಾಷ್ಟ್ರೀಯ ಸಂಸ್ಥೆಯಾಗಿದೆ. ವಿಶ್ವಾದ್ಯಂತ ಇಂಧನ ಮತ್ತು ಸುರಕ್ಷತೆಯನ್ನು ಸುಧಾರಿಸಲು ಮತ್ತು ಇಂಗಾಲ-ತಟಸ್ಥ ಭವಿಷ್ಯಕ್ಕೆ ಸುಸ್ಥಿರ ಪರಿವರ್ತನೆಯಾಗಿ ಸೌರಶಕ್ತಿಯನ್ನು ಉತ್ತೇಜಿಸುತ್ತದೆ ಹಾಗೂ ಕೃಷಿ, ಆರೋಗ್ಯ, ಸಾರಿಗೆ ಮತ್ತು ವಿದ್ಯುತ್ ಉತ್ಪಾದನಾ ವಲಯಗಳಲ್ಲಿ ಸೌರಶಕ್ತಿಯ ಬಳಕೆಯನ್ನು ಉತ್ತೇಜಿಸುತ್ತದೆ.

************

ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ ೧೫೦ನೇ ಜನ್ಮದಿನಾಚರಣೆಯ ಸ್ಮರಣಾರ್ಥ ಈ ತಿಂಗಳ ೩೧ರಂದು ದೇಶಾದ್ಯಂತ ಏಕತಾ ಓಟವನ್ನು ಆಯೋಜಿಸಲಾಗುತ್ತಿದೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು, ದೇಶವಾಸಿಗಳನ್ನು ಈ ಓಟದಲ್ಲಿ ಭಾಗವಹಿಸುವಂತೆ ಹಾಗೂ ಈ ಮೂಲಕ ಸರ್ದಾರ್ ವಲ್ಲಭಭಾಯಿ ಪಟೇಲ್ ಮತ್ತು ಅವರ ಏಕೀಕೃತ ಭಾರತದ ದೃಷ್ಟಿಕೋನವನ್ನು ಗೌರವಿಸುವಂತೆ ಕೋರಿದ್ದಾರೆ.

************

ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಇಂದಿನಿಂದ ಬೆಲ್ಜಿಯಂನ ಬ್ರುಜೆಲ್ಸ್‌ಗೆ ಎರಡು ದಿನಗಳ ಭೇಟಿ ನೀಡಲಿದ್ದಾರೆ. ಐರೋಪ್ಯ ಒಕ್ಕೂಟದ ಕಾರ್ಯನಿರ್ವಾಹಕ ಉಪಾಧ್ಯಕ್ಷ ಮತ್ತು ಐರೋಪ್ಯ ವಾಣಿಜ್ಯ ಆಯುಕ್ತ ಮಾರೋಸ್ ಸೆಫ್ಕೋವಿಕ್ ಅವರೊಂದಿಗೆ ಉನ್ನತಮಟ್ಟದ ಸಂವಾದ ನಡೆಸಲಿದ್ದಾರೆ. ಸಮಗ್ರ, ಸಮತೋಲಿತ ಮತ್ತು ಪರಸ್ಪರ ಪ್ರಯೋಜನಕಾರಿ ವ್ಯಾಪಾರ ಒಪ್ಪಂದವನ್ನು ಮಾಡಿಕೊಳ್ಳಲು ಎರಡೂ ಕಡೆಯವರು ಪ್ರಯತ್ನಗಳನ್ನು ತೀವ್ರಗೊಳಿಸಿದ್ದಾರೆ. ಭಾರತ-ಐರೋಪ್ಯ ಒಕ್ಕೂಟ ಮುಕ್ತ ವ್ಯಾಪಾರ ಒಪ್ಪಂದ ಮಾತುಕತೆಗಳಲ್ಲಿ ಈ ಭೇಟಿ ನಿರ್ಣಾಯಕ ಹಂತದಲ್ಲಿದೆ.

************

ದೇಶಾದ್ಯಂತ ನಡೆಯುತ್ತಿರುವ ನಾಲ್ಕು ದಿನಗಳ ಛಠ್ ಪೂಜಾಚರಣೆಯಲ್ಲಿ ಇಂದು ಮೂರನೇ ಮತ್ತು ಮುಖ್ಯ ದಿನವಾಗಿದೆ. ಇದನ್ನು ಸಂಧ್ಯಾ ಅರ್ಘ್ಯ ಎಂದು ಕರೆಯಲಾಗುತ್ತದೆ. ಸಂಧ್ಯಾ

ಅರ್ಘ್ಯವನ್ನು ಸೂರ್ಯ ಮುಳುಗುವ ವೇಳೆಗೆ ಸಮರ್ಪಿಸಲಾಗುವುದು. ಈ ಪವಿತ್ರ ಕ್ಷಣವು ಸೂರ್ಯ ದಿನವಿಡೀ ಒದಗಿಸುವ ಬೆಳಕು, ಉಷ್ಣತೆ ಮತ್ತು ಶಕ್ತಿಗೆ ಕೃತಜ್ಞತೆಯನ್ನು ಸೂಚಿಸುತ್ತದೆ. ಈ ದಿನದಂದು, ಕುಟುಂಬಗಳು ನದಿ ದಂಡೆಗಳಲ್ಲಿ ಅಥವಾ ಜಲಮೂಲಗಳಲ್ಲಿ ಒಟ್ಟುಗೂಡುತ್ತಾರೆ, ಥೇಕುವಾ ಎಂಬ ಸಿಹಿ ಖಾದ್ಯ, ಕಬ್ಬು, ಹಣ್ಣುಗಳು ಮತ್ತು ದೀಪಗಳನ್ನು ಬಿದಿರಿನ ಬುಟ್ಟಿಯಲ್ಲಿ ಹೊತ್ತುಕೊಂಡು ಹೋಗಿ ಪೂಜೆ ಸಲ್ಲಿಸುವ ಸಂಪ್ರದಾಯವಿದೆ.

************

ಮೋಂಥಾ ಚಂಡಮಾರುತದ ಹಿನ್ನೆಲೆಯಲ್ಲಿ, ಕರ್ನಾಟಕದ ಕರಾವಳಿ, ಆಂಧ್ರಪ್ರದೇಶದ ಕರಾವಳಿ, ತಮಿಳುನಾಡು, ಪುದುಚೇರಿ, ರಾಯಲಸೀಮಾ, ಒಡಿಶಾ, ಪೂರ್ವ ರಾಜಸ್ಥಾನ, ಗುಜರಾತ್, ಕೇರಳ, ಮಾಹೆ ಮತ್ತು ಕಾರೈಕಲ್‌ನಲ್ಲಿ ಇಂದು ಭಾರೀ ಮಳೆಯಾಗುವ ಸಾಧ್ಯತೆ ಇದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಆಂಧ್ರಪ್ರದೇಶದ ಮಚ್ಲಿಪಟ್ಟಣಂ, ಕೋನಸೀಮಾ, ಕಳಿಂಗಪಟ್ಟಣಂ, ಪೂರ್ವ ಗೋದಾವರಿ, ಪಶ್ಚಿಮ ಗೋದಾವರಿ, ಕಾಕಿನಾಡ ಜಿಲ್ಲೆಗಳಲ್ಲಿ ಇದೇ ೩೧ರವರೆಗೆ ಧಾರಾಕಾರ ಮಳೆಯಾಗಲಿದೆ ಎಂದು ಇಲಾಖೆ ತಿಳಿಸಿದೆ. ತಮಿಳುನಾಡು, ಆಂಧ್ರಪ್ರದೇಶ, ಯಾನಂ ಮತ್ತು ಒಡಿಶಾ ಕರಾವಳಿ  ವ್ಯಾಪ್ತಿಯಲ್ಲಿ ಮತ್ತು ಬಂಗಾಳಕೊಲ್ಲಿಯಲ್ಲಿ ಬುಧವಾರದವರೆಗೆ ಮೀನುಗಾರರು ಸಮುದ್ರಕ್ಕೆ ಇಳಿಯದಂತೆ ಹವಾಮಾನ ಇಲಾಖೆ ಎಚ್ಚರಿಸಿದೆ.

************